ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)
(ಮುಂದುವರೆದ ಉಪವೇಶನಗಳು)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 17ನೇ ನವೆಂಬರ್, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೆರಡನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೆರಡನೇ ಪಟ್ಟಿ

2. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:-

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ, ರಾಷ್ಟ್ರಪತಿ/ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸದಸ್ಯರಿಗೆ ಈಗಾಗಲೇ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಆರು ಹಾಗೂ ಏಳನೇ ಪಟ್ಟಿಯ ರೀತ್ಯಾ.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಬಿ.ಆರ್. ಪಾಟೀಲ್, ಜಿ. ರಾಮಕೃಷ್ಣ ಮತ್ತು ಮಾಲೀಕಯ್ಯ ವಿ. ಗುತ್ತೇದಾರ್ ಅವರುಗಳು ರಾಜ್ಯದಲ್ಲಿ ಮಳೆ ಕಡಿಮೆಯಾಗಿ, ಬರಗಾಲದಿಂದ ಕೃಷಿ ಬೆಳೆಗಳು ಹಾಳಾಗಿರುವುದು, ಜನಜಾನುವಾರುಗಳಿಗೆ ಕುಡಿಯುವ ನೀರಿಗೆ ತೊಂದರೆಯಾಗಿರುವುದು, ಬರಗಾಲದಿಂದ ರೈತರು ಅನೇಕ ಸಂಕಷ್ಟಗಳಿಗೆ ಒಳಗಾಗಿರುವ ಬಗ್ಗೆ ಚರ್ಚಿಸುವುದು.

ಮು.ತಿ.ನೋ

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗುಡಿಬಂಡೆ ತಾಲ್ಲೂಕಿನ ಸೋಮೇನಹಳ್ಳಿ ಹೋಬಳಿಯಲ್ಲಿ 66/11 ಕೆ.ವಿ. ವಿದ್ಯುತ್ ಸ್ವೀಕರಣಾ ಕೇಂದ್ರದ ಕಾಮಗಾರಿ ಪ್ರಾರಂಭವಾಗಿ ಅನೇಕ ತಿಂಗಳು ಕಳೆದಿದ್ದರೂ ಗುತ್ತಿಗೆದಾರರು ಕಾಮಗಾರಿಯನ್ನು ಪೂರ್ಣಗೊಳಿಸಲು ವಿಳಂಬ ಮಾಡುತ್ತಿರುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

2. ಶ್ರೀ ಕೆ.ಜಿ. ಬೋಪಯ್ಯ ಅವರು ಅರಣ್ಯ ಇಲಾಖೆಗೆ ಹಸ್ತಾಂತರಿಸಿರುವ ಸಿ ಅಂಡ್ ಡಿ ಜಮೀನುಗಳನ್ನು ವಾಪಸ್ಸು ಪಡೆಯದೆ ಫಾರಂ 50, 53ರ ಅಡಿಯಲ್ಲಿ ಸಲ್ಲಿಸಿರುವ ಅರ್ಜಿಗಳನ್ನು ಅಕ್ರಮ-ಸಕ್ರಮಗೊಳಿಸಲು ಸಾಧ್ಯವಾಗುತ್ತಿಲ್ಲವಾದ್ದರಿಂದ, ಸಿ ಅಂಡ್ ಡಿ ಜಮೀನುಗಳನ್ನು ಅರಣ್ಯ ಇಲಾಖೆಯಿಂದ ವಾಪಸ್ಸು ಪಡೆದು ಅನುಭೋಗದಲ್ಲಿರುವವರಿಗೆ ಸಾಗುವಳಿ ಪತ್ರ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3. ಶ್ರೀ ಮಾನಪ್ಪ ಡಿ.ವಜ್ಜಲ್ ಅವರು ರಾಯಚೂರು ಜಿಲ್ಲೆಯ ಲಿಂಗಸುಗೂರು ಪಟ್ಟಣದ ದೊಡ್ಡ ಕೆರೆಯನ್ನು 'ರಾಷ್ಟ್ರೀಯ ಕೆರೆ ಸಂರಕ್ಷಣಾ ಯೋಜನೆ' ಅಡಿ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಕೆ.ಆರ್. ರಮೇಶ್‌ಕುಮಾರ್ ಅವರು ಆಂಧ್ರಪ್ರದೇಶದ ತಿರುಪತಿ ತಿರುಮಲದಲ್ಲಿರುವ ರಾಜ್ಯದ ಅಥಿತಿ ಗೃಹಗಳನ್ನು ಆನ್‌ಲೈನ್ ಮೂಲಕ ಕಾಯ್ದಿರಿಸುತ್ತಿರುವುದರಿಂದ ರಾಜ್ಯದ ಯಾತ್ರಾರ್ಥಿಗಳಿಗೆ ತೊಂದರೆಯಾಗುತ್ತಿದ್ದು, ಈ ಪದ್ಧತಿಯನ್ನು ಕೈಬಿಡುವ ಬಗ್ಗೆ ಮಾನ್ಯ ಅಬಕಾರಿ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

5. ಶ್ರೀ ಎಲ್.ಎ. ರವಿಸುಬ್ರಮಣ್ಯ ಅವರು ಬೆಂಗಳೂರು ನಗರ ಹಾಗೂ ಬಸವನಗುಡಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಮರ್ಪಕವಾಗಿ ಕಸ ವಿಲೇವಾರಿಯಾಗದೆ ಅಕಾಲಿಕ ಮಳೆಯಿಂದ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚಿರುವ ಹಿನ್ನೆಲೆಯಲ್ಲಿ ಘನತ್ಯಾಜ್ಯದ ಶೀಘ್ರ ಹಾಗೂ ಸಮರ್ಪಕ ವಿಲೇವಾರಿಗೆ ಕೈಗೊಂಡಿರುವ ತುರ್ತು ಕ್ರಮಗಳ ಬಗ್ಗೆ ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

6. ಶ್ರೀ ಮಾಲಿಕಯ್ಯ ವಿ.ಗುತ್ತೇದಾರ್ ಅವರು ಅಫಜಲಪೂರ ತಾಲ್ಲೂಕಿನಲ್ಲಿರುವ ಪ್ರಸಿದ್ಧ ದತ್ತಾತ್ರೇಯ ದೇವಸ್ಥಾನಕ್ಕೆ ಬರುವ ಸ್ಟೇಷನ್ ಗಾಣಗಾಪುರದಿಂದ ರೇವೂರ ರಸ್ತೆ, ದೇವಲಗಾಣಗಾಪುರದಿಂದ ಅಫಜಲಪೂರದವರೆಗಿನ ರಸ್ತೆ ಹಾಗೂ ಚೌಡಾಪುರದಿಂದ ಚಿನ್ಮಳ್ಳಿವರೆಗಿನ ರಸ್ತೆಯು ತುಂಬಾ ಹದಗೆಟ್ಟಿದ್ದು, ಸದರಿ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಅಗತ್ಯವಿರುವ ಅನುದಾನವನ್ನು ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

7. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಹಳೇಕೋಟೆ ಹೋಬಳಿ ಅತ್ತಿಚೌಡೇನಹಳ್ಳಿ ಗ್ರಾಮದ ಒಂಟಿಗುಡ್ಡ ಕಾವಲ್ ಸರ್ವೆ ನಂ:1ರಲ್ಲಿ ಸರ್ಕಾರದಿಂದ ಕಾಯ್ದಿರಿಸಲಾಗಿರುವ ಜಮೀನಿನಲ್ಲಿ ಅನಧಿಕೃತ ಸಾಗುವಳಿದಾರರಿಗೆ ಹಾಗೂ ಮುಳುಗಡೆ ನಿರಾಶ್ರಿತರಿಗೆ ಉಳಿದಿರುವ 831.1 ಎಕರೆ ಜಮೀನನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಎಸ್.ವೈ. ಕುಳಗೇರಿ
ಕಾರ್ಯದರ್ಶಿ(ಪ್ರ)

NR

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)